# <u>ಕರ್ನಾಟಕ ಸರ್ಕಾರದ ನಡವಳಿಗಳು</u>

<u>ವಿಷಯ</u>:- 7ನೇ ರಾಜ್ಯ ವೇತನ ಆಯೋಗದ ಅವಧಿಯನ್ನು ವಿಸ್ತರಿಸುವ ಬಗ್ಗೆ.

<u>ಓದಲಾಗಿದೆ:</u>

1. ದಿನಾಂಕ 19-11-2022ರ ಸರ್ಕಾರದ ಆದೇಶ ಸಂಖ್ಯೆ: ಆಇ 45 ಎಸ್‌ಆರ್‌ಪಿ 2022.
2. ದಿನಾಂಕ 01-12-2022ರ ಸರ್ಕಾರದ ಆದೇಶ ಸಂಖ್ಯೆ: ಆಇ 46 ಎಸ್‌ಆರ್‌ಪಿ 2022.
3. ದಿನಾಂಕ 08-03-2023ರ ಸರ್ಕಾರದ ಆದೇಶ ಸಂಖ್ಯೆ: ಆಇ 45 ಎಸ್‌ಆರ್‌ಪಿ 2022.

<u>ಪ್ರಸ್ತಾವನೆ:</u>

ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು, ಈ ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ದಿನಾಂಕ 19-11-2022ರ ಸರ್ಕಾರಿ ಆದೇಶದಲ್ಲಿ ಶ್ರೀ ಸುಧಾಕರ್ ರಾವ್, ಭಾ.ಆ.ಸೇ (ನಿವೃತ್ತ) ಇವರ ಅಧ್ಯಕ್ಷತೆಯಲ್ಲಿ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ, 06 ತಿಂಗಳ ಒಳಗಾಗಿ ವರದಿಯನ್ನು ಸಲ್ಲಿಸುವಂತೆ ಆದೇಶಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ(3) ರಲ್ಲಿ ಓದಲಾದ ದಿನಾಂಕ:08-03-2023ರ ಆದೇಶದಲ್ಲಿ 7ನೇ ವೇತನ ಆಯೋಗದ ಪರಿಶೀಲನಾರ್ಹ ಅಂಶಗಳಿಗೆ ಸೇರ್ಪಡೆ ಮಾಡಿ ಆದೇಶ ಹೊರಡಿಸಲಾಗಿರುತ್ತದೆ. ವೇತನ ಪರಿಷ್ಕರಣೆ ಕುರಿತಂತೆ ಸರ್ಕಾರದ ವಿವಿಧ ಇಲಾಖೆ/ಸಂಸ್ಥೆಗಳೊಂದಿಗೆ ವೇತನ ಆಯೋಗದ ಸಮಾಲೋಚನಾ ಕಾರ್ಯಗಳು ಪ್ರಗತಿಯಲ್ಲಿರುವುದನ್ನು ಸರ್ಕಾರವು ಗಮನಿಸಿದೆ ಮತ್ತು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್‌ಆರ್‌ಪಿ 2022,**

**ಬೆಂಗಳೂರು, ದಿನಾಂಕ 15ನೇ ಮೇ 2023.**

ಕರ್ನಾಟಕ 7ನೇ ರಾಜ್ಯ ವೇತನ ಆಯೋಗವು ತನ್ನ ಕಾರ್ಯಕಲಾಪಗಳನ್ನು ಪೂರ್ಣಗೊಳಿಸಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ಅನುಕೂಲವಾಗುವಂತೆ 7ನೇ ರಾಜ್ಯ ವೇತನ ಆಯೋಗದ ಕಾಲಾವಧಿಯನ್ನು ದಿನಾಂಕ 19-05-2023 ರಿಂದ 6 ತಿಂಗಳವರೆಗೆ ವಿಸ್ತರಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Uma K

(ಉಮಾ. ಕೆ.)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6. ಗೌರವಾನ್ವಿತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.

7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಕಾರ್ಯದರ್ಶಿ, 7ನೇ ರಾಜ್ಯ ವೇತನ ಆಯೋಗ, ಔಷಧ ನಿಯಂತ್ರಣ ಇಲಾಖೆಯ ಕಟ್ಟಡ, 3ನೇ ಮಹಡಿ, ಅರಮನೆ ರಸ್ತೆ, ಬೆಂಗಳೂರು
12. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ವಿಧಾನಪರಿಷತ್ತು, ವಿಧಾನಸೌಧ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪಕುಲಪತಿಗಳು / ರಿಜಿಸ್ಟ್ರಾರ್‌ಗಳು.
17. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
18. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
19. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ / ಜಿಲ್ಲಾ ಖಜಾನೆಗಳು.
20. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
21. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
25. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ / ವಿಧಾನ ಮಂಡಲದ ಗ್ರಂಥಾಲಯ.
26. ವಾರ ಪತ್ರ/ಶಾಖೆಯ ರಕ್ಷಾಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**